**Akashvani : Bangalore**
**24.06.2024 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**24.06.2024 / 19.35 hrs**

**<><*<><>*><>**

ಮುಖ್ಯಾಂಶಗಳು

**೧. ಇಂದಿನಿಂದ ೧೮ನೇ ಲೋಕಸಭೆಯ ಮೊದಲ ಅಧಿವೇಶನ ಆರಂಭ; ಲೋಕಸಭಾ ಸದಸ್ಯರಾಗಿ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಸಂಸದರಿಂದ ಪ್ರಮಾಣವಚನ ಸ್ವೀಕಾರ**

**೨. ಗೋಧಿ ಸಂಗ್ರಹಕ್ಕೆ ಮಿತಿ ವಿಧಿಸಿದ ಕೇಂದ್ರ ಸರ್ಕಾರ**

**೩. ಯುಎಇ ವಿದೇಶಾಂಗ ಸಚಿವರೊಂದಿಗೆ ಕೇಂದ್ರ ಸಚಿವ ಡಾ.ಎಸ್.ಜೈಶಂಕರ್ ದ್ವಿಪಕ್ಷೀಯ ಮಾತುಕತೆ**

**೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಇಂದು ಭಾರತ - ಆಸ್ಟ್ರೇಲಿಯಾ ತಂಡಗಳು ಮುಖಾಮುಖಿ**

**<><*<><>*><>**

೧೮ನೇ ಲೋಕಸಭೆಯ ಮೊದಲ ಅಧಿವೇಶನ ಇಂದು ಆರಂಭಗೊಂಡಿತು. ನೂತನ ಸಂಸತ್ ಸದಸ್ಯರು ಪ್ರಮಾಣವಚನ ಸ್ವೀಕರಿಸಿದರು. ಮೊದಲಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಲೋಕಸಭಾ ಸದಸ್ಯರಾಗಿ ಪ್ರಮಾಣವಚನ ಸ್ವೀಕರಿಸಿದರು. ಹಂಗಾಮಿ ಸ್ಪೀಕರ್ ಭತೃಹರಿ ಮಹತಾಬ್ ಅವರು, ಪ್ರಧಾನಿ ಮೋದಿ ಅವರಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ನಂತರ ಮಹತಾಬ್ ಅವರಿಗೆ ನೆರವಾಗಲು ರಾಷ್ಟ್ರಪತಿ ನೇಮಿಸಿರುವ ಸಭಾಧ್ಯಕ್ಷರ ಸಮಿತಿಯ ಸದಸ್ಯರಾದ ರಾಧಮೋಹನ್ ಪ್ರಸಾದ್, ಫಗ್ಗನ್‌ಸಿಂಗ್ ಕುಲಸ್ತೆ ಪ್ರಮಾಣವಚನ ಸ್ವೀಕರಿಸಿದರು. ಆದರೆ ಸಮಿತಿಯ ಇತರ ಸದಸ್ಯರಾದ ಕಾಂಗ್ರೆಸ್ ಸಂಸದ ಕೆ.ಸುರೇಶ್, ಡಿ.ಎಂ.ಕೆ. ಸಂಸದ ಟಿ.ಆರ್.ಬಾಲು, ತೃಣಮೂಲ ಕಾಂಗ್ರೆಸ್‌ನ ಸುದೀಪ್ ಬಂಡೋಪಾಧ್ಯಾಯ ಪ್ರಮಾಣವಚನ ಸ್ವೀಕರಿಸಲಿಲ್ಲ. ನಂತರ ಕೇಂದ್ರ ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್, ಶಿವರಾಜ್‌ಸಿಂಗ್ ಚೌವ್ಹಾಣ್, ನಿತಿನ್ ಗಡ್ಕರಿ, ಮನೋಹರ್ ಲಾಲ್, ಪಿಯೂಶ್ ಗೋಯಲ್, ಜಿತನ್‌ರಾಮ್ ಮಾಂಜಿ, ರಾಜೀವ್ ರಂಜನ್ ಅಲಿಯಾಸ್ ಲಲನ್ ಸಿಂಗ್, ಡಾ. ವಿರೇಂದ್ರ ಕುಮಾರ್, ಕಿರಣ್ ರಿಜಿಜು, ಚಿರಾಗ್ ಪಾಸ್ವಾನ್, ಮತ್ತಿತರರು ಲೋಕಸಭಾ ಸದಸ್ಯರಾಗಿ ಪ್ರಮಾಣವಚನ ಸ್ವೀಕರಿಸಿದರು.

ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ, ಪ್ರಲ್ಹಾದ್‌ಜೋಶಿ, ವಿ.ಸೋಮಣ್ಣ ಮತ್ತು ಶೋಭಾ ಕರಂದ್ಲಾಜೆ ಕನ್ನಡದಲ್ಲಿ ಪ್ರಮಾಣವಚನ ಸ್ವೀಕರಿಸಿದರೆ, ಧರ್ಮೇಂದ್ರ ಪ್ರಧಾನ್ ಹಾಗೂ ಜ್ಯೂಯಲ್ ಒರಾಮ್, ಒಡಿಯಾ ಭಾಷೆಯಲ್ಲಿ ಪ್ರತಿಜ್ಞಾವಿಧಿ ಸ್ವೀಕರಿಸಿದರು. ಕೇಂದ್ರ ಸಚಿವ ಸರ್ಬಾನಂದ್ ಸೋನೊವಾಲ್ ಅಸ್ಸಾಮಿ ಭಾಷೆಯಲ್ಲಿ, ಕೆ. ರಾಮ್‌ಮೋಹನ್ ನಾಯ್ದು ತೆಲುಗು ಭಾಷೆಯಲ್ಲಿ ಹಾಗೂ ಕೇಂದ್ರ ಸಚಿವ ದುರ್ಗದಾಸ್ ಅವರು ಸಂಸ್ಕೃತದಲ್ಲಿ ಪ್ರಮಾಣವಚನ ಸ್ವೀಕರಿಸಿದರು. ಇದಕ್ಕೂ ಮುನ್ನ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಲೋಕಸಭೆಯ ಹಂಗಾಮಿ ಸ್ಪೀಕರ್ ಆಗಿ ಭಾರತೀಯ ಜನತಾ ಪಕ್ಷದ ಸಂಸದ ಭತೃಹರಿ ಮಹತಾಬ್ ಅವರಿಗೆ ಪ್ರಮಾಣ ವಚನ ಬೋಧಿಸಿದರು.  ನಾಡಿದ್ದು, ಸ್ಪೀಕರ್ ಆಯ್ಕೆ ನಡೆಯಲಿದೆ. ಇದೇ ೨೭ರಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸಂಸತ್ತಿನ ಉಭಯ ಸದನಗಳ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ರಾಜ್ಯಸಭೆಯ ಕಲಾಪ ಗುರುವಾರ ಆರಂಭವಾಗಲಿದ್ದು, ಸಂಸತ್ತಿನ ಅಧಿವೇಶನ ಜುಲೈ ೩ ರಂದು ಮುಕ್ತಾಯವಾಗಲಿದೆ

**<><*<><>*><>**

೧೮ನೇ ಲೋಕಸಭೆಯ ಮೊದಲ ಅಧಿವೇಶನ ಆರಂಭಕ್ಕೂ ಮುನ್ನ ಸಂಸತ್ ಭವನದ ಹೊರಗೆ ಮಾಧ್ಯಮಗಳೊಂದಿಗೆ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಎಲ್ಲ ನೂತನ ಚುನಾಯಿತ ಸಂಸತ್ ಸದಸ್ಯರಿಗೆ ಶುಭಾಶಯ ಕೋರಿದರು. ಎಲ್ಲರನ್ನು ಒಗ್ಗೂಡಿಸಿ ದೇಶಕ್ಕೆ ಸೇವೆ ಸಲ್ಲಿಸಲು ಮತ್ತು ಜನರ ಆಶೋತ್ತರಗಳನ್ನು ಈಡೇರಿಸಲು ತಮ್ಮ ಸರ್ಕಾರ ನಿರಂತರ ಪ್ರಯತ್ನ ನಡೆಸಲಿದೆ ಎಂದು ಪ್ರಧಾನಿ ಮೋದಿ ಹೇಳಿದರು.  ಸರ್ಕಾರವನ್ನು ನಡೆಸಲು ಬಹುಮತದ ಅಗತ್ಯವಿದೆ. ಆದರೆ ದೇಶವನ್ನು ನಡೆಸಲು ಒಮ್ಮತವು ಅತ್ಯಂತ ಮಹತ್ವದ್ದಾಗಿದೆ. ಎಲ್ಲರನ್ನೂ ಒಗ್ಗೂಡಿಸಿ ಸಂವಿಧಾನದ ಪಾವಿತ್ರ್ಯತೆಯನ್ನು ಕಾಪಾಡುವ ಮೂಲಕ ತಮ್ಮ ಸರ್ಕಾರವು ಮುಂದುವರಿಯಲು ಮತ್ತು ನಿರ್ಧಾರಗಳನ್ನು ವೇಗವಾಗಿ ತೆಗೆದುಕೊಳ್ಳಲು ಬಯಸುತ್ತದೆ ಎಂದು ಅವರು ಹೇಳಿದರು.  ವಿಶ್ವದ ಅತಿ ದೊಡ್ಡ ಚುನಾವಣೆಯನ್ನು ಅತ್ಯಂತ ಅಚುಕಟ್ಟಾಗಿ ನಡೆಸಲಾಗಿದೆ. ಸ್ವಾತಂತ್ರ್ಯದ ನಂತರ ಇದೇ ಎರಡನೇ ಬಾರಿಗೆ ದೇಶದ ಜನತೆಯು ಸತತ ಮೂರನೇ ಅವಧಿಗೆ ಸರ್ಕಾರ ಅಧಿಕಾರಕ್ಕೆ ಬರಲು ಅವಕಾಶ ಮಾಡಿಕೊಟ್ಟಿದ್ದಾರೆ ಎಂದರು. ದೇಶದ ಜನರು ಪ್ರತಿಪಕ್ಷಗಳಿಂದ ಉತ್ತಮ ಹೆಜ್ಜೆಗಳನ್ನು ನಿರೀಕ್ಷಿಸುತ್ತಾರೆ ಮತ್ತು ಪ್ರಜಾಪ್ರಭುತ್ವದ ಘನತೆಯನ್ನು ಕಾಪಾಡಲು ಪ್ರತಿಪಕ್ಷಗಳು ತಮ್ಮ ನಿರೀಕ್ಷೆಗಳನ್ನು ಈಡೇರಿಸುತ್ತವೆ ಎಂಬ ಭರವಸೆ ಇದೆ. ದೇಶಕ್ಕೆ ಜವಾಬ್ದಾರಿಯುತ ವಿರೋಧ ಪಕ್ಷದ ಅಗತ್ಯವಿದೆ. ಸಾಮಾನ್ಯ ಜನರ ಈ ನಿರೀಕ್ಷೆಗಳನ್ನು ಈಡೇರಿಸಲು ೧೮ನೇ ಲೋಕಸಭೆಯ ಸಂಸದರು ಪ್ರಯತ್ನಿಸುತ್ತಾರೆ ಎಂದು ಪ್ರಧಾನಿ ನರೇಂದ್ರ ಮೋದಿ ವಿಶ್ವಾಸ ವ್ಯಕ್ತಪಡಿಸಿದರು.

<><*<><>*><>

ಐ.ಎನ್.ಡಿ.ಐ.ಎ ಒಕ್ಕೂಟದ ಸಂಸದರು ಇಂದು ಸಂವಿಧಾನದ ಪ್ರತಿಗಳನ್ನು ಕೈಯಲ್ಲಿ ಹಿಡಿದು ಸಂಸತ್ ಭವನದ ಆವರಣದಲ್ಲಿ ಪ್ರತಿಭಟನೆ ನಡೆಸಿದರು. ಕಾಂಗ್ರೆಸ್, ಟಿಎಂಸಿ, ಡಿಎಂಕೆ, ಎಡಪಕ್ಷಗಳು ಮತ್ತು ಇತರ ಸಂಸದರು ಸಂವಿಧಾನದ ಪ್ರತಿಗಳೊಂದಿಗೆ ಸಮಾವೇಶಗೊಂಡು, ಹಂಗಾಮಿ ಸ್ಪೀಕರ್ ಆಯ್ಕೆ ಕುರಿತು ತಮ್ಮ ವಿರೋಧ ವ್ಯಕ್ತಪಡಿಸಿದರು. ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತು ಮಲ್ಲಿಕಾರ್ಜುನ ಖರ್ಗೆ, ಡಿಎಂಕೆಯ ಟಿ.ಆರ್.ಬಾಲು, ಟಿಎಂಸಿಯ ಕಲ್ಯಾಣ್ ಬ್ಯಾನರ್ಜಿ, ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಸೇರಿದಂತೆ ಐ.ಎನ್.ಡಿ.ಐ.ಎ ಒಕ್ಕೂಟದ ನಾಯಕರು ಭಾಗಿಯಾಗಿದ್ದರು.

<><*<><>*><>

ಆಹಾರ ಭದ್ರತೆಯನ್ನು ಖಾತರಿಪಡಿಸಿಕೊಳ್ಳಲು ಕೇಂದ್ರ ಸರ್ಕಾರವು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ವ್ಯಾಪಾರಿಗಳು, ಸಗಟು ವ್ಯಾಪಾರಿಗಳು, ಚಿಲ್ಲರೆ ವ್ಯಾಪಾರಿಗಳು, ದೊಡ್ಡ ವ್ಯಾಪಾರಿಗಳು ಮತ್ತು ಸಂಸ್ಕಾರ ಘಟಕಗಳಿಗೆ ಅನ್ವಯವಾಗುವಂತೆ ಗೋಧಿ ಮೇಲೆ ಸಂಗ್ರಹ ಮಿತಿಯನ್ನು ವಿಧಿಸಿದೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆಯ ಕಾರ್ಯದರ್ಶಿ ಸಂಜೀವ್ ಚೋಪ್ರಾ, ವ್ಯಾಪಾರಿಗಳು ಮತ್ತು ಸಗಟು ವ್ಯಾಪಾರಿಗಳಿಗೆ ಗೋಧಿಯ ದಾಸ್ತಾನು ಮಿತಿ ಮೂರು ಸಾವಿರ ಮೆಟ್ರಿಕ್ ಟನ್ ಆಗಿದೆ. ಚಿಲ್ಲರೆ ವ್ಯಾಪಾರಿಗಳಿಗೆ, ೧೦ ಮೆಟ್ರಿಕ್ ಟನ್ ಮತ್ತು ದೊಡ್ಡ ವ್ಯಾಪಾರಿಗಳಿಗೆ, ಸಂಗ್ರಹ ಮಿತಿಯು ಪ್ರತಿ ಔಟ್‌ಲೆಟ್‌ಗೆ ೧೦ ಮೆಟ್ರಿಕ್ ಟನ್ ಮತ್ತು ಅವರ ಎಲ್ಲಾ ಡಿಪೋಗಳಲ್ಲಿ ಮೂರು ಸಾವಿರ ಮೆಟ್ರಿಕ್ ಟನ್ ಆಗಿರುತ್ತದೆ. ಈ ಮಿತಿಯು ೨೦೨೫ರ ಮಾರ್ಚ್ ೩೧ ರವರೆಗೆ ಜಾರಿಯಲ್ಲಿರುತ್ತವೆ ಎಂದು ತಿಳಿಸಿದ್ದಾರೆ. ಗೋಧಿಯ ಬೆಲೆ ಸ್ಥಿರವಾಗಿರುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರವು ಅಗತ್ಯತೆಯ ಅನುಸಾರ ಸಂಗ್ರಹ ಮಿತಿಗಳನ್ನು ಪರಿಶೀಲಿಸುತ್ತದೆ ಎಂದು ಅವರು ಹೇಳಿದರು. ಗೋಧಿ ಕೊರತೆಯ ಬಗ್ಗೆ ಮಾಧ್ಯಮ ವರದಿಗಳನ್ನು ತಿರಸ್ಕರಿಸಿದ ಸಂಜೀವ್ ಚೋಪ್ರಾ, ದೇಶದಲ್ಲಿ ಗೋಧಿಯ ಕೊರತೆಯಿಲ್ಲ ಎಂದು ಸ್ಪಷ್ಟಪಡಿಸಿದರು. ಗೋಧಿ ಬೆಲೆಯು ಸ್ಥಿರವಾಗಿದ್ದು, ಗ್ರಾಹಕರ ಹಿತಾಸಕ್ತಿಯಿಂದ ಬೆಲೆಯಲ್ಲಿ ಸ್ಥಿರತೆಯನ್ನು ಕಾಯ್ದುಕೊಳ್ಳಲಾಗುವುದು ಎಂದು ಅವರು ಹೇಳಿದರು.

<><*<><>*><>

ಯುಎಇ ಪ್ರವಾಸದಲ್ಲಿರುವ ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರು ಇಂದು ಯುಎಇ ವಿದೇಶಾಂಗ ವ್ಯವಹಾರಗಳ ಸಚಿವ ಅಬ್ದುಲ್ಲಾ ಬಿನ್ ಜಾಯೇದ್ ಅಲ್ ನಹಯಾನ್ ಅವರ ಜೊತೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ವಾಣಿಜ್ಯ ಮತ್ತು ಆರ್ಥಿಕ ಸಹಯೋಗ, ಶಿಕ್ಷಣ, ಸಂಸ್ಕೃತಿ ಸೇರಿದಂತೆ ವಿವಿಧ ಕ್ಷೇತ್ರಗಳ ಕುರಿತು ಉಭಯ ದೇಶಗಳ ಪಾಲುದಾರಿಕೆ ಕಾರ್ಯತಂತ್ರದ ಅವಲೋಕನ ನಡೆಸಲಾಯಿತು. ಇದೇ ವೇಳೆ ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಕುರಿತು ಉಭಯ ನಾಯಕರು ಚರ್ಚೆ ನಡೆಸಿದರು.

**<><*<><>*><>**

ನೀಟ್-ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಭಾಗಿಯಾಗಿರುವ ಶಂಕೆಯ ಮೇರೆಗೆ ಸಂಜಯ್ ತುಕಾರಾಂ ಜಾಧವ್ ಮತ್ತು ಜಲೀಲ್ ಉಮರ್ ಖಾನ್ ಪಠಾಣ್ ಎಂಬುವವರನ್ನು ಮಹಾರಾಷ್ಟ್ರದ ನಾಂದೇಡ್ ಭಯೋತ್ಪಾದನಾ ನಿಗ್ರಹ ದಳ-ಎಟಿಎಸ್ ಬಂಧಿಸಿದೆ. ಬಂಧಿತರಿಬ್ಬರೂ ಜಿಲ್ಲಾ ಪರಿಷತ್ ಶಾಲೆಗಳಲ್ಲಿ ಶಿಕ್ಷಕರಾಗಿದ್ದು, ಲಾತೂರ್‌ನಲ್ಲಿ ಖಾಸಗಿ ಕೋಚಿಂಗ್ ಸಂಸ್ಥೆಗಳನ್ನು ನಡೆಸುತ್ತಿದ್ದಾರೆ. ಹಾಗೆಯೇ, ಈರಣ್ಣ, ಮಷ್ಣಜಿ, ಕೊಂಗಾಲ್ವಾರ್ ಮತ್ತು ದೆಹಲಿಯ ಗಂಗಾಧರ್ ಎಂಬ ಒಟ್ಟು ನಾಲ್ವರ ವಿರುದ್ಧ ಲಾತೂರ್‌ನ ಶಿವಾಜಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಇಡೀ ಪ್ರಕರಣದ ತನಿಖೆಗಾಗಿ ಲಾತೂರ್ ನಗರ ಉಪವಿಭಾಗೀಯ ಪೊಲೀಸ್ ಅಧಿಕಾರಿ ಭಗವತ್ ಫಂಡೆ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ ರಚಿಸಲಾಗಿದೆ. ಈ ನಡುವೆ, ಬಿಹಾರದ ಹಜಾರಿಬಾಗ್ ಪರೀಕ್ಷಾ ಕೇಂದ್ರದಲ್ಲಿ ನೀಟ್-ಯುಜಿ ಪರೀಕ್ಷೆಯ ಪ್ರಶ್ನೆಪತ್ರಿಕೆಗಳ ಗೌಪ್ಯತೆಯ ತನಿಖೆಯ ಸಮಯದಲ್ಲಿ ಹಲವಾರು ಲೋಪಗಳು ಕಂಡುಬಂದಿವೆ ಎಂದು ಆರ್ಥಿಕ ಅಪರಾಧ ಘಟಕ ಹೇಳಿದೆ. ಸಂಜೀವ್ ಕುಮಾರ್ ಅಲಿಯಾಸ್ ಲೂಟಾನ್ ಮುಖಿಯಾ ಅಪರಾಧಿಕ ಗುಂಪಿನ ಮೂಲಕ ಸೋರಿಕೆಯಾದ ಪ್ರಶ್ನೆ ಪತ್ರಿಕೆಗಳು ಬಿಹಾರಕ್ಕೆ ತಲುಪಿವೆ ಎಂದು ತನಿಖಾ ಸಂಸ್ಥೆ ತಿಳಿಸಿದೆ.

**<><*<><>*><>**

ಕರ್ನಾಟಕ, ಕೇರಳ, ಗುಜರಾತ್, ಮಹಾರಾಷ್ಟ್ರ, ಲಕ್ಷದ್ವೀಪ್, ತಮಿಳುನಾಡು ಮತ್ತು ಗೋವಾದಲ್ಲಿ ಮುಂದಿನ ಐದು ದಿನಗಳ ಕಾಲ ಧಾರಾಕಾರ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇದೇ ವೇಳೆ ಮಧ್ಯಪ್ರದೇಶ, ಛತ್ತೀಸ್‌ಘಡ, ಒಡಿಶಾ, ಪಶ್ಚಿಮ ಬಂಗಾಳ, ಜಾರ್ಖಂಡ್, ಬಿಹಾರ ಮತ್ತು ಪೂರ್ವ ಉತ್ತರ ಪ್ರದೇಶದ ಕೆಲವೆಡೆ ನೈಋತ್ಯ ಮುಂಗಾರು ಮುಂದಿನ ಮೂರು ದಿನಗಳಲ್ಲಿ ಮುಂದುವರಿಯಲು ಅನುಕೂಲಕರ ವಾತಾವರಣವಿದೆ. ಈಶಾನ್ಯ ಭಾರತ ಮತ್ತು ಪಶ್ಚಿಮ ಬಂಗಾಳದ ಉತ್ತರ ಭಾಗದಲ್ಲಿ ಮುಂದಿನ

ಐದು ದಿನಗಳ ಕಾಲ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಉತ್ತಾರಖಂಡ, ಉತ್ತರ ಪ್ರದೇಶ, ರಾಜಸ್ಥಾನ, ಜಮ್ಮು-ಕಾಶ್ಮೀರ ಹಾಗೂ ಹಿಮಾಚಲ ಪ್ರದೇಶದಲ್ಲಿ ಮುಂದಿನ ಎರಡರಿಂದ ಮೂರು ದಿನಗಳ ಕಾಲ ಗುಡುಗು ಮಿಂಚು ಹಾಗೂ ಬಿರುಗಾಳಿ ಪರಿಸ್ಥಿತಿ ಇರಲಿವೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ. ಈ ನಡುವೆ ಪಶ್ಚಿಮ ಉತ್ತರ ಪ್ರದೇಶ, ಪಂಜಾಬ್, ಹರಿಯಾಣ, ಚಂಡೀಗಢ ಮತ್ತು ದೆಹಲಿಯ ಕೆಲವೆಡೆ ಮುಂದಿನ ಎರಡು ದಿನಗಳವರೆಗೆ ಬಿಸಿಗಾಳಿ ಪರಿಸ್ಥಿತಿ ಇರಲಿದ್ದು, ಬಳಿಕ ಕ್ರಮೇಣ ಇಳಿಮುಖವಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೧೩೧ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೭ ಸಾವಿರದ ೩೪೧ ಅಂಕಗಳು ಏರಿಕೆಯಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೩೭ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೩ ಸಾವಿರದ ೫೩೮ ಅಂಕಗಳು ದಾಖಲಾಗಿದೆ. ಅಮರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೩ ರೂಪಾಯಿ ೪೬ ಪೈಸೆಯಷ್ಟಾಗಿದೆ.

<><*<><>*><>

ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ಟೂರ್ನಿಯ ಸೇಂಟ್ ಲೂಸಿಯಾದ ಡೇರೆನ್ ಸಮ್ಮಿ ನ್ಯಾಷನಲ್ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ಭಾರತ ಮತ್ತು ಆಸ್ಟ್ರೇಲಿಯಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಸೂಪರ್ ೮ ಘಟ್ಟದಲ್ಲಿ ಅಫ್ಘಾನಿಸ್ತಾನ ಮತ್ತು ಬಾಂಗ್ಲಾದೇಶವನ್ನು ಈಗಾಗಲೇ ಮಣಿಸಿರುವ ಭಾರತ ತಂಡ, ಮೂರನೇ ನೇರ ಗೆಲುವಿನಂದಿಗೆ ಗುಂಪಿನ ಅಗ್ರಸ್ಥಾನಿಯಾಗುವ ಜೊತೆಗೆ ಸೆಮಿಫೈನಲ್‌ಗೆ ಅರ್ಹತೆ ಪಡೆಯುವ ಅವಕಾಶ ಹೊಂದಿದೆ. ಇದೇ ವೇಳೆ ಇಂದು ಬೆಳಗ್ಗೆ ಆಂಟಿಗುವಾದ ಸರ್ ವಿವಿಯನ್ ರಿಚರ್ಡ್ಸ್ ಕ್ರೀಡಾಂಗಣದಲ್ಲಿ ನಡೆದ ಮತ್ತೊಂದು ಪಂದ್ಯದಲ್ಲಿ, ವೆಸ್ಟ್ ಇಂಡೀಸ್ ವಿರುದ್ಧ ದಕ್ಷಿಣ ಆಫ್ರಿಕಾ ತಂಡ ೩ ವಿಕೆಟ್‌ಗಳಿಂದ ಜಯ ಸಾಧಿಸಿತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>